
ಆಂದೋಲನ

19/11/2024

# ಶ್ರೀ ವಿದ್ಯಾಗಣಪತಿ ದೇವಸ್ಥಾನ ಉದ್ಘಾಟನೆ



ಮೈಸೂರು: ಎಟಿಎಂಇ ಕಾಲೇಜು ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ವಿದ್ಯಾಗಣಪತಿ ದೇವಸ್ಥಾನದ ಉದ್ಘಾಟನೆ, ಶ್ರೀ ವಿದ್ಯಾಗಣಪತಿ ಮೂರ್ತಿ ಪ್ರಾಣ ಪ್ರತಿಷ್ಠಾಪನಾ ಸಮಾರಂಭ ಸೋಮವಾರ ಸಕಲ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ನೆರವೇರಿತು.

ಈ ಕಾರ್ಯಕ್ರಮದ ಪೂರ್ವಭಾವಿಯಾಗಿ ಹಿಂದಿನ ಶನಿವಾರ ಮತ್ತು ಭಾನುವಾರ ವಿವಿಧ ರೀತಿಯ ಹೋಮ ಹವನ, ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಕಾಲೇಜಿನ ಆಡಳಿತ ಮಂಡಳಿ ಅಧ್ಯಕ್ಷ ಎಲ್. ಅರುಣ್ ಕುಮಾರ್, ಕಾರ್ಯದರ್ಶಿ ಕೆ. ಶಿವಶಂಕರ್ ಮತ್ತು ಖಜಾಂಚಿ ಆರ್.



ವೀರೇಶ್ ದಂಪತಿ ಹೋಮ ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ನೆರವೇರಿಸಿದರು. ಉದ್ಘಾಟನಾ ಸಮಾರಂಭದಲ್ಲಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಮಾಜಿ ಶಾಸಕ ಮಧು ಜಿ.ಮಾದೇಗೌಡ, ವಿವಿಧ ಸಂಸ್ಥೆಗಳ ಮುಖ್ಯಸ್ಥರು, ಕಾಲೇಜಿನ ಆಡಳಿತ ಮಂಡಳಿಸದಸ್ಯರು, ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದರು.